ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/01/ಇಸಿಎಸ್(2)/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:05.08.2023

## ಜ್ಞಾಪನ

ವಿಷಯ: ಜುಲೈ 2023 ರ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯಕ್ಕೆ ಗೈರುಹಾಜರಾಗುವ ಉಪನ್ಯಾಸಕರುಗಳ ಮೇಲೆ ಶಿಸ್ತು ಕ್ರಮ ಜರುಗಿಸುವ ಬಗ್ಗೆ.

ಉಲ್ಲೇಖ: 1.ತಾಂತ್ರಿಕ ಪರೀಕ್ಷಾ ಮಂಡಳಿಯ 139 ನೇ ಕೇಂದ್ರೀಯ ಸಭೆ ದಿ:27.12.2005 ರ ನಿರ್ಣಯ 139.4.8.3
2. ತಾಂತ್ರಿಕ ಪರೀಕ್ಷಾ ಮಂಡಳಿಯ 151 ನೇ ಕೇಂದ್ರೀಯ ಸಭೆ. ದಿ:27.01.2012 ರ ನಿರ್ಣಯ 151.3.5
3. ಈ ಕಛೇರಿ ಜ್ಞಾಪನ ಸಂ: ಬಿಟಿಇ/01/ಇಸಿಎಸ್(2)/2023 ದಿ: 02.08.2023
4. ಸರ್ಕಾರಿ ಆದೇಶ ಸಂ:ಇಡಿ/57/ಟಪಿಇ/2013 ಬೆಂಗಳೂರು, ದಿ:17-04-2015

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಜುಲೈ 2023 ರ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ಉಲ್ಲೇಖ(3) ರ ಪ್ರಕಾರ ವಿಕೇಂದ್ರೀಕೃತ ಮೌಲ್ಯಮಾಪನ ಕೇಂದ್ರಗಳಲ್ಲಿ ನಡೆಸಲಾಗುತ್ತಿದೆ. ಮೌಲ್ಯಮಾಪನ ಕಾರ್ಯವನ್ನು ನಿಗದಿತ ಸಮಯದಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಯಶಸ್ವಿಯಾಗಿ ಪೂರ್ಣಗೊಳಿಸುವುದು ನಮ್ಮೆಲ್ಲರ ಕರ್ತವ್ಯ ಹಾಗೂ ಜವಾಬ್ದಾರಿಯಾಗಿರುತ್ತದೆ. ಈ ನಿಟ್ಟಿನಲ್ಲಿ ಎಲ್ಲಾ ಸಂಸ್ಥೆಗಳ ಪ್ರಾಂಶುಪಾಲರು/ಉಪನ್ಯಾಸಕರುಗಳ ಸಹಕಾರವನ್ನು ಕೋರಲಾಗಿದೆ. ಮುಂದುವರೆದು ಉಲ್ಲೇಖ(4)ರ ಸರ್ಕಾರಿ ಆದೇಶದ ಪ್ರಕಾರ ಮೌಲ್ಯಮಾಪನ ಕಾರ್ಯಕ್ಕೆ ಗೈರುಹಾಜರಾದ ಉಪನ್ಯಾಸಕರ ಸಂಬಳವನ್ನು ಗೈರು ಹಾಜರಾದ ಅವಧಿಗೆ ಕಟಾಯಿಸಲು ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್‌ನಲ್ಲಿನ ಪರೀಕ್ಷಕರ ಪಟ್ಟಿಯಲ್ಲಿನ **ಉಪನ್ಯಾಸಕರುಗಳು ಮೌಲ್ಯಮಾಪನ ಕಾರ್ಯಕ್ಕೆ ಗೈರುಹಾಜರಾದಲ್ಲಿ ಆಯಾ ಪಾಲಿಟೆಕ್ನಿಕ್‌ಗಳ ಫಲಿತಾಂಶವನ್ನು ತಡೆಹಿಡಿಯಲಾಗುವುದು** ಮತ್ತು ವಿದ್ಯಾರ್ಥಿಗಳಿಗೆ ಆಗುವ ಶೈಕ್ಷಣಿಕ ಅನಾನುಕೂಲಗಳಿಗೆ ಸಂಸ್ಥೆಯ ಪ್ರಿನ್ಸಿಪಾಲರುಗಳನ್ನೇ ನೇರ ಜವಾಬ್ದಾರರನ್ನಾಗಿಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮುಂದಿನ ಕ್ರಮಕ್ಕಾಗಿ

ಪ್ರತಿ: 1.ಇ-ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2.ಕಂಪ್ಯೂಟರ್ ವಿಭಾಗಕ್ಕೆ – ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
3. ಇಬಿಎಲ್ ವಿಭಾಗ
4. ನೋಡಲ್ ಮೌಲ್ಯಮಾಪನ ಕೇಂದ್ರಗಳ ನೋಡಲ್ ಅಧಿಕಾರಿಗಳು/ಶಿಬಿರಾಧಿಗಳು/ಸಹಾಯಕ ಶಿಬಿರಾಧಿಕಾರಿಗಳು
5. ಕಾರ್ಯದರ್ಶಿಯವರ ಆಪ್ತ ಶಾಖೆ